ವಿಷಯ:- ಪ್ರಸ್ತುತಸಾಲಿನಲ್ಲಿ ತೆರೆಯಲ್ಪಡುವ ಪಶುವೈದ್ಯ ಶಾಲೆಗಳ ಸಂಖ್ಯೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೭:- (೬೦೪)
ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ)
ಮಾನ್ಯ ಪಶುಸಂಗೋಪನಾ ಸಚಿವರು ಈಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರ ಪ್ರಸ್ತುತ ವರ್ಷದಲ್ಲಿ ಎಷ್ಟು ಪಶುವೈದ್ಯ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿದೆ ;

ಆ) ಇದರಲ್ಲಿ ಕೋಲಾರ ಜಿಲ್ಲೆಯಲ್ಲಿ ಎಷ್ಟು ಪಶುವೈದ್ಯ ಶಾಲೆಗಳನ್ನು ಪ್ರಾರಂಭಿಸಲು ಆಲೋಚಿಸಿದೆ ಹಾಗೂ ಎಲ್ಲೆಲ್ಲಿ ಪ್ರಾರಂಭಿಸಲಾಗುವುದು? (ತಾಲ್ಲೂಕುವಾರು ವಿವರ ನೀಡುವುದು) ;

ಇ) ಈ ಮೇಲ್ಕಂಡ ಪಶುವೈದ್ಯ ಶಾಲೆಗಳಿಗೆ ಔಷಧಿ, ಮತ್ತು ಇತರೆ ಅನುಕೂಲಗಳಿಗೆ ತಗಲುವ ವೆಚ್ಚವೆಷ್ಟು?

ಶ್ರೀ.ಕೆ.ಎನ್. ನಾಗೇಗೌಡ
(ಪಶುಸಂಗೋಪನಾ ಮತ್ತು ಪಶುವೈದ್ಯ ರಾಜ್ಯ ಸಚಿವರು)

ಪ್ರಸ್ತುತ ವರ್ಷದಲ್ಲಿ ೨೦೦ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.

- ಇನ್ನೂ ಸರ್ಕಾರದ ಪರಿಶೀಲನೆಯಲ್ಲಿದೆ.

ಒಂದು ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರವನ್ನು ಪ್ರಾರಂಭಿಸಲು ಅನಾವರ್ತಕ ವೆಚ್ಚ ರೂ. ೧೮,೦೦೦.೦೦ ಮತ್ತು ಆವರ್ತಕ ವೆಚ್ಚ ರೂ. ೧,೧೬,೪೧೦.೦೦ ರಂತೆ ಒಟ್ಟು ರೂ. ೨೬೦.೦೦ ಲಕ್ಷಗಳೆಂದು ಅಂದಾಜು ಮಾಡಲಾಗಿದೆ.

ಸಚಿವರು:- ರಾಜ್ಯದಲ್ಲಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಬಗ್ಗೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ ೮೦:- (೬೦೧)
ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ)
ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು;
ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಜನ ಉಪಾಧ್ಯಾಯರು ಕಾರ್ಯನಿರ್ವಹಿಸುತ್ತಿದ್ದಾರೆ.
ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಉಪಾಧ್ಯಾಯರುಗಳ ಸಂಖ್ಯೆ ಎಷ್ಟು ಹಾಗೂ ಸರ್ಕಾರ ಆ ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡುವುದು?

ಡಾ. ಹೆಗ್ಗಪ್ಪ ಡಿ. ಲಮಾಣಿ
(ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ರಾಜ್ಯದಲ್ಲಿ ಒಟ್ಟು ೬,೧೯೩ ಪ್ರಾಥಮಿಕ ಶಾಲೆಗಳಿರುತ್ತವೆ.

ಈ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು ೧,೧೨,೨೫೦ ಉಪಾಧ್ಯಯರು ಕಾರ್ಯನಿರ್ವಹಿಸುತ್ತಿದ್ದಾರೆ.

ರಾಜ್ಯದಲ್ಲಿ ೧೩-೯-೦ ರಿಂದ ೩೧-೫-೧೧ ರವರೆವಿಗೆ ಒಟ್ಟು ೧೩,೬೨೩ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಇದರಲ್ಲಿ ಈಗಾಗಲೇ ಮೊದಲ ಹಂತವಾಗಿ ೫,೪೫೫ ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು, ಇನ್ನೂ ೧,೩೫೬ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ